MVC No. 287/2023 PW-1

**ದಿನಾಂಕ 17.07.2025ರಂದು ಸಾಕ್ಷಿ ಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು ಃ ಎದುರುದಾರರಾದ ಆರ್ 2 ಪರ ಶ್ರೀ ಜೆ ಎಸ್ ವಕೀಲರಿಂದ ಃ**

ಅಪಘಾತದ ಬಗ್ಗೆ ನನ್ನ ಮಗ ಕೃಷ್ಣ ದೂರನ್ನು ನೀಡಿರುತ್ತಾರೆ. ಅಪಘಾತವಾಗಿ 2 ವರೆ ವರ್ಷ ಆಗಿದೆ. ಆದರೆ ದಿನಾಂಕ ಗೊತ್ತಿಲ್ಲ. ದಿಃ23.12.2022 ರಂದು ಅಪಘಾತವಾಗಿದೆ ಎಂದರೆ ನಿಜ. ನಾನು ಕೆಲಸ ಮುಗಿಸಿಕೊಂಡು ಊರಿಗೆ ಹೋಗುವಾಗ ಅಪಘಾತವಾಗಿದೆ. ನಾನು ಆಟೋದಿಂದ ಇಳಿದು ನಿಂತಿದ್ದಾಗ ಅಪಘಾತವಾಗಿದೆ. ರಸ್ತೆ ದಾಟುವಾಗ ಅಪಘಾತವಾಗಿದೆ ಎಂದರೆ ಸುಳ್ಳು. ರಸ್ತೆ ಮಧ್ಯೆ ಅಪಘಾತವಾಗಿದೆ ಎಂದು ಪೋಲಿಸರು ನಕ್ಷೆ ಹಾಕಿದ್ದಾರೆಂದರೆ ಸುಳ್ಳು. ರಸ್ತೆಯ ಇಕ್ಕಲೆಗಳಲ್ಲಿ ಸೇವಾ ರಸ್ತೆ ಇದೆ ಎಂದರೆ ನಿಜ. ನನ್ನ ಮಗನನ್ನು ಸಾಕ್ಷಿ ವಿಚಾರಣೆ ಮಾಡಿಸುತ್ತೇನೆ. ನನ್ನ ಮಗ ಅಪಘಾತವನ್ನು ಕಣ್ಣಾರೆ ನೋಡಿಲ್ಲ. ನನ್ನನ್ನು ಯಾರು ಆಸ್ಪತ್ರೆಗೆ ಕರೆದುಕೊಂಡು ಹೋದರು ಎಂದು ಗೊತ್ತಿಲ್ಲ. ನಾನು ಮೆಡಿಕಲ್ ದಾಖಲೆಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿದ್ದೇನೆ ಎಂದರೆ ಸುಳ್ಳು. ಪೋಲಿಸರ ಜೊತೆ ಶಾಮೀಲಾಗಿ 6 ತಿಂಗಳ ನಂತರ ದೂರನ್ನು ನೀಡಿರುತ್ತೇನೆಂದರೆ ಸುಳ್ಳು. ನನಗೆ ಶಸ್ತ್ರ ಚಿಕಿತ್ಸೆಯಾಗಿದೆ. ನನಗೆ ಚಿಕಿತ್ಸೆ ನೀಡಿದ ವೈದ್ಯಾಧಿಕಾರಿಯವರನ್ನು ಸಾಕ್ಷಿ ಮಾಡಿಸುತ್ತೇನೆ. ಅಪಘಾತ ಪಡಿಸಿದ ವಾಹನಕ್ಕೆ ಜಖಂ ಆಗಿಲ್ಲ ಎಂದರೆ ಗೊತ್ತಿಲ್ಲ. ಪರಿಹಾರ ಪಡೆಯುವ ಸಲುವಾಗಿ ಸುಳ್ಳು ದೂರನ್ನು ಹಾಕಿ ಸುಳ್ಳು ಅರ್ಜಿ ಹಾಕಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸುಳ್ಳು. ನನ್ನ ವೈದ್ಯಕೀಯ ಚಿಕಿತ್ಸೆಗಾಗಿ 2 ಲಕ್ಷ ರೂಪಾಯಿ ಹಣ ಖರ್ಚಾಗಿದೆ ಎಂದು ಹೇಳಿದ್ದು ಅದು ಸುಳ್ಳು ಎಂದರೆ ಸುಳ್ಳು. ಆ ಬಗ್ಗೆ ಯಾವುದೇ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸುಳ್ಳು. ನನ್ನ ಮಗ ವ್ಯವಸಾಯ ಮಾಡುತ್ತಾನೆ. ನನಗೆ ಯಾವುದೇ ಆರ್ಥಿಕ ಮತ್ತು ದೈಹಿಕ ನಷ್ಟ ಉಂಟಾಗಿಲ್ಲವೆಂದರೆ ಸುಳ್ಳು. ನನಗೆ ನ್ಯೂನ್ಯತೆ ಯಿರುವ ಬಗ್ಗೆ ವೈದ್ಯಾಧಿಕಾರಿಯವರು ಪ್ರಮಾಣ ಪತ್ರವನ್ನು ನೀಡಿರುತ್ತಾರೆ.. ನಾನು

ಪರಿಹಾರ ಪಡೆಯಲು ಪೋಲಿಸರ ಜೊತೆ ಶಾಮೀಲಾಗಿ ಸುಳ್ಳು ಕೇಸು ದಾಖಲಿಸಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸುಳ್ಳು.

**<u>ಮರುವಿಚಾರಣೆ ಃ ಇಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)**Na**

ಓ ಹೇ ಕೇ ಸ ಒ

**(ವೆಂಕಟೇಶಪ್ಪ. ವಿ)**
**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ.,ಚನ್ನಪಟ್ಟಣ.**